## ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 472(465)

ಉತ್ತರಿಸಬೇಕಾದ ದಿನಾಂಕ : 22.07.2019.

ಉತ್ತರಿಸುವ ಸಚಿವರು : ಮಾನ್ಯ ಕೃಷಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರುಗಿ ಕಂದಾಯ ವಿಭಾಗ ವ್ಯಾಪ್ತಿಯಲ್ಲಿ ಬರುವ ಕಲಬುರುಗಿ, ಬೀದರ್, ರಾಯಚೂರು, ಕೊಪ್ಪಳ, ಬಳ್ಳಾರಿ, ಹಾಗೂ ಯಾದಗಿರಿ ಜಿಲ್ಲೆಯಲ್ಲಿರುವ ಕೃಷಿ ಇಲಾಖೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಹುದ್ದೆಗಳು ಖಾಲಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ) | ಈ ಕಛೇರಿಗಳಿಗೆ ಮಂಜೂರಾಗಿರುವ ಹಾಗೂ ಭರ್ತಿಯಾಗಿರುವ ಹುದ್ದೆಗಳೆಷ್ಟು: ಖಾಲಿ ಇರುವ ಹುದ್ದೆಗಳೆಷ್ಟು: (ಜಿಲ್ಲಾವಾರು ಮಾಹಿತಿ ನೀಡುವುದು) | ಖಾಲಿಯಿರುವ ಹುದ್ದೆಗಳ ಸಂಖ್ಯೆ-590 ವೃಂದವಾರು, ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾಹಿತಿಯನ್ನು ನಮೂನೆಯಲ್ಲಿ ಭರ್ತಿ ಮಾಡಲಾಗಿದೆ (ಅನುಬಂಧ-1ರಲ್ಲಿ ಲಗತ್ತಿಸಿದೆ)<br><br>ಸರ್ಕಾರದ ಆದೇಶ ಸಂಖ್ಯೆ: ಕೃಇ/166/ಕೃಪಸೇ 2011, ದಿನಾಂಕ:08-07-2014 ರಲ್ಲಿ ಕೃಷಿ ಮತ್ತು ಜಲಾನಯನ ಅಭಿವೃದ್ಧಿ ಇಲಾಖೆಗಳು ಮರು ಹೊಂದಾಣಿಕೆ ಆದೇಶದನ್ವಯ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಕೃಷಿ ಇಲಾಖೆಯ-ಅಧಿಕಾರಿ/ ನೌಕರರು ಜಲಾನಯನ ಅಭಿವೃದ್ಧಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವುದಿಲ್ಲವಾದ ಕಾರಣ ಅನ್ವಯಿಸುವುದಿಲ್ಲ.<br>ಜಲಾನಯನ ಅಭಿವೃದ್ಧಿ ಇಲಾಖೆಯ ಅಧೀನದಲ್ಲಿ ಅರಣ್ಯ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿ/ ನೌಕರರು ಕಾರ್ಯನಿರ್ವಹಿಸುತ್ತಿದ್ದು, ಖಾಲಿ ಹುದ್ದೆಗಳ ವಿವರಗಳನ್ನು ಅನುಬಂಧ-2ರಲ್ಲಿ ಲಗತ್ತಿಸಿದೆ. |

| | | |
|---|---|---|
| ಇ) | ಖಾಲಿ ಉಳಿದಿರುವ ಹುದ್ದೆಗಳ ಭರ್ತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು: (ಸಮಗ್ರ ಮಾಹಿತಿ ನೀಡುವುದು) | ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಗಿನಂತೆ ಕ್ರಮ ವಹಿಸಲಾಗಿರುತ್ತದೆ.<br>➢ 2018ನೇ ಸಾಲಿನಲ್ಲಿ ಒಟ್ಟು 13 ಸಹಾಯಕ ಕೃಷಿ ನಿರ್ದೇಶಕರು, 65 ಕೃಷಿ ಅಧಿಕಾರಿ ಹಾಗೂ 116 ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲಾಗಿದೆ. 45 ಸಹಾಯಕ ಕೃಷಿ ಅಧಿಕಾರಿಗಳನ್ನು ಕೃಷಿ ಅಧಿಕಾರಿ ವೃಂದದಲ್ಲಿ ನಿಯಮ-32ರಡಿ ಸ್ವತಂತ್ರ ಪ್ರಭಾರದಲ್ಲಿರಿಸಲಾಗಿದೆ<br>➢ 2019ನೇ ಸಾಲಿನಲ್ಲಿ 14 ಕೃಷಿ ಅಧಿಕಾರಿಗಳಿಗೆ ಸಹಾಯಕ ಕೃಷಿ ನಿರ್ದೇಶಕರ ವೃಂದಕ್ಕೆ ಬಡ್ತಿ ನೀಡಲಾಗಿದೆ. ಖಾಲಿ ಉಳಿದಿರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಪರಿಶೀಲಿಸಲಾಗುತ್ತಿದೆ.<br>➢ 07-ಪ್ರಯೋಗಶಾಲಾ ಸಹಾಯಕ ಹಾಗೂ 22-ಬೆರಳಚ್ಚುಗಾರರ ಹುದ್ದೆಗಳನ್ನು ಭರ್ತಿ ಮಾಡಲು ಈಗಾಗಲೇ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.<br>ಸರ್ಕಾರದ ಪತ್ರ ಸಂ:ಕೃಇ/60/ಕೃಪಸೇ/2015 ದಿ:23.5.2017ರಲ್ಲಿ ಸರ್ಕಾರದ ಸುತ್ತೋಲೆ ದಿ:26.7.2005 ಹಾಗೂ ದಿ:23.9.2008ರಲ್ಲಿ ಸೂಚಿಸಿರುವಂತೆ ಬೆರಳಚ್ಚುಗಾರರು, ವಾಹನ ಚಾಲಕ ಮತ್ತು ಗ್ರೂಪ್-ಡಿ ವೃಂದದ ಖಾಲಿ ಇರುವ ಹುದ್ದೆಗಳನ್ನು ಇನ್ನು ಮುಂದೆ ಖಾಲಿಯಾಗುವ ಹುದ್ದೆಗಳನ್ನು ಸಹ ಹೊರಗುತ್ತಿಗೆ ಮೂಲಕ ಭರ್ತಿ ಮಾಡಲಾಗುತ್ತಿದೆ. |
| ಈ) | ಹುದ್ದೆಗಳು ಖಾಲಿ ಉಳಿದುರುವುದರಿಂದ ಯೋಜನೆಗಳ ಅನುಷ್ಠಾನಕ್ಕೆ ತೊಂದರೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಈ ನಿಟ್ಟಿನಲ್ಲಿ ಯಾವ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ. | ಯೋಜನೆಗಳ ಅನುಷ್ಠಾನಕ್ಕೆ ತೊಂದರೆಯಾಗದಂತೆ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ ನೌಕರರುಗಳಿಗೆ ಹೆಚ್ಚಿನ ಪ್ರಭಾರದಲ್ಲಿರಿಸಿ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ. |

ಸಂಖ್ಯೆ:ಕೃಇ 21 ಕೃಸಿಸ್ವೀರ 2019

(ಎನ್. ಹೆಚ್. ಶಿವಶಂಕರ ರೆಡ್ಡಿ)

ಕೃಷಿ ಸಚಿವರು